ಊ) ಉಜ್ಜಯಿನಿ ಗ್ರಾಮದಲ್ಲಿ ಮುಜರಾಯಿ ಇಲಾಖೆ ವತಿಯಿಂದ ಯಾವುದೇ ಕಾಮಗಾರಿ ಕೈಗೊಂಡಿರುವುದಿಲ್ಲ.

ಋ) ಪ್ರಶ್ನೆ ಉದ್ಭವಿಸುವುದಿಲ್ಲ.

1907 (2455) ಶ್ರೀಮತಿ ಭಾಗೀರಥಿ ಟಿ. (ಕೊಟ್ಟೂರು) :– ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೂಡ್ಲಿಗಿ ತಾಲ್ಲೂಕು ಕೊಟ್ಟೂರು ಮತ ಕ್ಷೇತ್ರದ ತಿಮ್ಮಲಾಪುರ ಗ್ರಾಮ ಹಾಗೂ ಮೀನಕೆರೆ ಗ್ರಾಮದ ಬಳಿ ನೂತನ ವಿದ್ಯುತ್ ಸಬ್ ಸ್ಟೇಷನ್‌ಗಳನ್ನು ಪ್ರಾರಂಭಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್. ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ಮತ್ತು ಆ) ಕೂಡ್ಲಿಗಿ ತಾಲ್ಲೂಕು ಕೊಟ್ಟೂರು ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮೀನಕೆರೆಯಲ್ಲಿ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರ ಸ್ಥಾಪಿಸುವ ಪ್ರಸ್ತಾವನೆಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಲಹಾ ಸಮಿತಿಯಿಂದ ದಿನಾಂಕ 19–01–2007 ರಂದು ಅನುಮೋದನೆ ದೊರೆತಿರುತ್ತದೆ. ಕಾಮಗಾರಿಯ ವಿವರವಾದ ಯೋಜನಾ ವರದಿಯನ್ನು ಸಿದ್ಧಪಡಿಸಲಾಗುತ್ತಿದೆ.

ಸದರಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ತಿಮ್ಮಲಾಪುರದ ಸುತ್ತಾ ಮುತ್ತಾ ಇರುವ ಹನ್ಸಿ, ಹೊಸಹಳ್ಳಿ ಮತ್ತು ಕೋಗ್ಲಿ – ಈ ಸ್ಥಳಗಳಲ್ಲಿ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರಗಳು ಈಗ ಸ್ಥಾಪನೆಗೊಳ್ಳುತ್ತಿರುವುದರಿಂದ, ತಿಮ್ಮಲಾಪುರದಲ್ಲಿ ನೂತನ ವಿದ್ಯುತ್ ಉಪ ಕೇಂದ್ರದ ಪ್ರಸ್ತಾವನೆ ಸದ್ಯಕ್ಕೆ ಇರುವುದಿಲ್ಲ.

ಹನ್ಸಿ, ಹೊಸಹಳ್ಳಿ ಮತ್ತು ಕೋಗ್ಲಿ ಗ್ರಾಮಗಳಲ್ಲಿ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರಗಳ ಕಾಮಗಾರಿಗಳು ಪ್ರಗತಿಯಲ್ಲಿದ್ದು, 2007–08 ರಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಈ ವಿದ್ಯುತ್ ಉಪ ಕೇಂದ್ರಗಳನ್ನು ಚಾಲನೆಗೊಳಿಸುವ ಗುರಿಯನ್ನು ಹೊಂದಲಾಗಿದೆ.

1909 (1465) ಶ್ರೀ ದೇಶಪಾಂಡೆ ಆರ್. ವಿ. (ಹಲಿಯಾಳ್) :–ಮಾನ್ಯ ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ಕಾರವಾರ – ಅಂಕೋಲಗಳ ನಡುವೆ ವಾಯು ಸಂಪರ್ಕವನ್ನು "ಸೀಬರ್ಡ್–ರಕ್ಷಕಾ ಇಲಾಖೆ–ಕೇಂದ್ರ ಸರ್ಕಾರ" ಇವುಗಳ ಸಹಯೋಗದೊಂದಿಗೆ ಕಾರ್ಯಗತಗೊಳಿಸಲು ರಾಜ್ಯ ಸರ್ಕಾರ ಇಚ್ಛಿಸಿದೆಯೇ;

ಆ) ಹಾಗಿದ್ದಲ್ಲಿ ಇದಕ್ಕೆ ಬೇಕಾಗುವ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು;

ಇ) ಈ ಯೋಜನೆಯು ಅನುಷ್ಠಾನಕ್ಕಾಗಿ 2007–08 ನೇ ಸಾಲಿನ ಆಯವ್ಯಯದಲ್ಲಿ ಮೀಸಲು ಇಡಲು ಉದ್ದೇಶಿಸಿರುವ ಹಣವೆಷ್ಟು?

ಶ್ರೀ ಬಿ. ಶ್ರೀರಾಮುಲು (ಪ್ರವಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

ಅ) ಹೌದು

ಆ) ಈ ಬಗ್ಗೆ ರಕ್ಷಣಾ ಮಂತ್ರಾಲಯಕ್ಕೆ ಅನುಮತಿ ನೀಡಲು ಕೋರಿಕೆ ಸಲ್ಲಿಸಿದೆ. ಜೊತೆಗೆ ನಾಗರೀಕ ವಿಮಾನಯಾನ ಮಂತ್ರಾಲಯ ಮತ್ತು ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರಕ್ಕೂ ಇಲ್ಲಿ ನಾಗರೀಕ ವಿಮಾನಯಾನಕ್ಕೆ ಸೌಕರ್ಯ ಕಲ್ಪಿಸಲು ಮನವಿ ಮಾಡಿದೆ. ಕೇಂದ್ರ ಸರ್ಕಾರದ ಸಂಬಂಧಪಟ್ಟ ಅಧಿಕಾರಿಗಳ ಜೊತೆ ಚರ್ಚಿಸಿದೆ. ಇದಕ್ಕೆ ಬೇಕಾಗುವ ಹೆಚ್ಚುವರಿ ಜಮೀನನ್ನು ಮತ್ತು ಎಲ್ಲ ಸಹಕಾರವನ್ನು ರಾಜ್ಯ ಸರ್ಕಾರವು ನೀಡಲು ಸಿದ್ಧವಿರುವ ಬಗ್ಗೆ ದಿನಾಂಕ 23–03–2007 ರಂದು ಸರ್ಕಾರ ಆದೇಶ ಸಹ ಹೊರಡಿಸಿದೆ.

ಇ) ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿಗಾಗಿ 2007–08 ನೇ ಸಾಲಿನ ಆಯವ್ಯಯದಲ್ಲಿ ಒಟ್ಟಾರೆ ರೂ. 50.00 ಕೋಟಿಗಳ ಅವಕಾಶವನ್ನು ಕಲ್ಪಿಸಲಾಗಿದೆ.

1912 (1734) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) :– ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನಲ್ಲಿ ನಡೆಯುತ್ತಿರುವ ಜಾನಪದ ಜಾತ್ರೆ ಕಾರ್ಯಕ್ರಮಕ್ಕೆ ಇಲ್ಲಿಯವರೆಗೂ ಖರ್ಚಾಗಿರುವ ಹಣವೆಷ್ಟು;

ಆ) ಜಾನಪದ ಜಾತ್ರೆ ಕಾರ್ಯಕ್ರಮವನ್ನು ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ;

ಇ) ಹಾಗಿದ್ದಲ್ಲಿ, ಎಂದಿನಿಂದ ಜಾರಿಗೆ ತರಲಾಗುವುದು?